457

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | 230(322) |
| ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 15/02/2024. |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಗಳು. |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಆಡಳಿತ ಹಿತದೃಷ್ಟಿಯಿಂದ ರಾಜ್ಯದಲ್ಲಿ ಲಕ್ಷಾಂತರ ಪದವೀಧರರು, ಸ್ನಾತಕೋತ್ತರ ಪದವೀಧರರು, ಪಿ.ಹೆಚ್.ಡಿ., ಹಾಗೂ ಇತರ ಪದವಿಗಳನ್ನು ಪಡೆದು ಸರ್ಕಾರಿ ಉದ್ಯೋಗ ದೊರಕದೆ ಇವರುಗಳ ಉಜ್ವಲ ಭವಿಷ್ಯದ ಹಿತದೃಷ್ಟಿಯಿಂದ ಸರ್ಕಾರದ ಅಧೀನದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಸಾವಿರಾರು ಗ್ರೂಪ್ 'ಎ', ಗ್ರೂಪ್ 'ಬಿ, ಗ್ರೂಪ್ 'ಸಿ' ಸಿಬ್ಬಂದಿ ವರ್ಗದ ಹುದ್ದೆಗಳನ್ನು ಭರ್ತಿ ಮಾಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು; | ನೇಮಕಾತಿ ಪ್ರಾಧಿಕಾರಗಳು ಖಾಲಿ ಹುದ್ದೆಗಳನ್ನು ಗುರುತಿಸಿ ಆರ್ಥಿಕ ಇಲಾಖೆಯ ಅನುಮೋದನೆಯೊಂದಿಗೆ ಪ್ರಸ್ತಾವನೆಗಳನ್ನು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸಲ್ಲಿಸಿದ ನಂತರ ಅವುಗಳನ್ನು ಪರಿಶೀಲಿಸಿ ಅಧಿಸೂಚನೆ ಹೊರಡಿಸಿ ಭರ್ತಿ ಮಾಡಲು ಕ್ರಮವಹಿಸಲಾಗುವುದು. |
| ಆ) | ಸರ್ಕಾರವು ಪ್ರತಿ ವರ್ಷ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗ್ರೂಪ್ 'ಸಿ ಮತ್ತು ಗ್ರೂಪ್ 'ಬಿ' ಗ್ರೂಪ್ 'ಎ' ಅಧಿಕಾರಿಗಳ ಹುದ್ದೆಗಳನ್ನು ಕೆ.ಪಿ.ಎಸ್.ಸಿ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ ಸ್ಥಳೀಯ ಅರ್ಹ ಅಭ್ಯರ್ಥಿಗಳಿಗೆ ಪ್ರಥಮ ಆದ್ಯತೆ ನೀಡಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನೇಕ ಸುತ್ತೋಲೆಗಳನ್ನು ಹೊರಡಿಸಿದ್ದರೂ ನೇಮಕಾತಿ ವಿಳಂಬವಾಗುತ್ತಿರಲು ಕಾರಣವೇನು? ಹಾಗೂ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಆಯೋಗದಲ್ಲಿ ನೇಮಕಾತಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. ಆದಾಗ್ಯೂ ಈ ಕೆಳಕಂಡ ಆಡಳಿತಾತ್ಮಕ/ತಾಂತ್ರಿಕ ಅಂಶಗಳಿಂದಾಗಿ ನೇಮಕಾತಿಯ ವಿವಿಧ ಹಂತಗಳಲ್ಲಿ ವಿಳಂಬಕ್ಕೆ ಕಾರಣವಾಗುತ್ತಿವೆ.<br><br>1. ಆಯೋಗಕ್ಕೆ ಖಾಯಂ/ಗುತ್ತಿಗೆ/ ಹೊರಗುತ್ತಿಗೆ ಎಲ್ಲಾ ವೃಂದದ ಹುದ್ದೆಗಳನ್ನು ಸೇರಿಸಿ ಒಟ್ಟು 377 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 126 ಹುದ್ದೆಗಳು ಖಾಲಿ ಇರುತ್ತವೆ.<br><br>2. ವಿವಿಧ ನೇಮಕಾತಿ ಪ್ರಾಧಿಕಾರಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಲ್ಲಿ ಹಲವಾರು ನ್ಯೂನ್ಯತೆಗಳು ಕಂಡುಬಂದಿದ್ದು ಅವುಗಳ ಬಗ್ಗೆ ಸ್ಪಷ್ಟೀಕರಣ/ ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ನೀಡಲು ನೇಮಕಾತಿ ಪ್ರಾಧಿಕಾರಗಳು ಕಾಲಾವಕಾಶ ತೆಗೆದುಕೊಳ್ಳುತ್ತಿರುವುದು.<br><br>3. ಪ್ರತಿ ನೇಮಕಾತಿ ಪ್ರಕ್ರಿಯೆಗಳಲ್ಲಿ ಅಭ್ಯರ್ಥಿಗಳು ಕಾನೂನು ಪ್ರಕರಣಗಳನ್ನು ದಾಖಲಿಸುತ್ತಿರುವುದು.<br><br>4. ಕರ್ನಾಟಕ ನಾಗರಿಕ ಸೇವೆಯ ವಿವಿಧ ವೃಂದದ ಹುದ್ದೆಗಳನ್ನು ನೇಮಕಾತಿ ಮಾಡುವ ಸಲುವಾಗಿ ವಿವಿಧ ಇಲಾಖೆಗಳ ಆಯ್ಕೆ ಪ್ರಾಧಿಕಾರಗಳು/ ಕರ್ನಾಟಕ ಪರೀಕ್ಷಾ ಪ್ರಾಧಿಕಾರ/ವಿಶ್ವವಿದ್ಯಾಲಯಗಳು/ ಮಂಡಳಿಗಳಲ್ಲದೆ ಕೇಂದ್ರ ಲೋಕಸೇವಾ ಆಯೋಗವು ನಡೆಸುವ ಪರೀಕ್ಷೆಗಳ ದಿನಾಂಕಗಳು ಘರ್ಷಣೆಯಾಗದಂತೆ ಪರೀಕ್ಷೆ ದಿನಾಂಕಗಳನ್ನು ನಿಗದಿಪಡಿಸಬೇಕಾಗಿರುತ್ತದೆ. ಪ್ರತಿ ಶನಿವಾರ ಮತ್ತು ಭಾನುವಾರಗಳಂದು ಹಲವಾರು ಪರೀಕ್ಷೆಗಳು ನಡೆಸಲಾಗುತ್ತಿದ್ದು ಈ ದಿನಾಂಕಗಳಲ್ಲದೆ/ಹಬ್ಬಗಳು /ಜಯಂತಿಗಳು/ ರಾಷ್ಟ್ರೀಯ |

| | | |
|---|---|---|
| | | ದಿನಾಚರಣೆಗಳ ದಿನಾಂಕಗಳನ್ನು ಹೊರತುಪಡಿಸಿ ಪರೀಕ್ಷೆಗೆ ದಿನಾಂಕವನ್ನು ನಿಗದಿಪಡಿಸ ಬೇಕಿರುತ್ತದೆ. |
| | | 5. ಆಯೋಗವು ಅಧಿಸೂಚಿಸುವ ಕೆಲವು ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳಲ್ಲಿ ವಿಕಲಚೇತನ ಅಭ್ಯರ್ಥಿಗಳ ವೈದ್ಯಕೀಯ ತಪಾಸಣೆ ಕಾರ್ಯವನ್ನು ಮಾಡಿಸಬೇಕಾಗಿರುತ್ತದೆ. |
| | | 6. ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅಭ್ಯರ್ಥಿಗಳು ಕೆಲವು ಸಂದರ್ಭಗಳಲ್ಲಿ ವಿವಿಧ ದಾಖಲೆಗಳನ್ನು ಹಾಜರುಪಡಿಸಲು ಕಾಲಾವಕಾಶವನ್ನು ತೆಗೆದುಕೊಳ್ಳುತ್ತಿದ್ದು, ನಿಗದಿತ ಸಮಯದಲ್ಲಿ ದಾಖಲೆಗಳನ್ನು ಸಲ್ಲಿಸದೇ ಇರುವುದು. |
| | | 7. ಕೆಲವು ಅಭ್ಯರ್ಥಿಗಳು ಆಯೋಗದಿಂದ ಅಧಿಸೂಚಿಸಲಾದ ಹಲವಾರು ಹುದ್ದೆಗಳಿಗೆ ಏಕಕಾಲದಲ್ಲಿ ಆಯ್ಕೆ ಹೊಂದುವುದರಿಂದ ವಿವಿಧ ಹುದ್ದೆಗಳು ಭರ್ತಿಯಾಗದೇ ಖಾಲಿ ಉಳಿಯುವಂತಾಗುವುದನ್ನು ತಪ್ಪಿಸಲು ಸದರಿ ನೇಮಕಾತಿಗಳಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಿದ ನಂತರ Common Candidates ಗಳಿಂದ Willingness ಪಡೆದು ಅಭ್ಯರ್ಥಿಗಳಿಂದ ಸ್ವೀಕೃತವಾಗುವ Willingness ಅನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ. |
| | | ವಿಳಂಬವನ್ನು ತಡೆಗಟ್ಟಿ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಆಯೋಗದ ಅಧಿಕಾರಿ /ನೌಕರರು ನಿಗಧಿತ ಕಛೇರಿ ವೇಳೆಯ ಮುನ್ನ ಮತ್ತು ನಂತರ ಹಾಗೂ ಸಾರ್ವತ್ರಿಕ ರಜಾ ದಿನಗಳಲ್ಲಿ ನಿರಂತರವಾಗಿ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಅಲ್ಲದೇ ನೇಮಕಾತಿ ಪ್ರಕ್ರಿಯೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತಾತ್ಕಾಲಿಕ ವೇಳಾ ಪಟ್ಟಿಯನ್ನು ಹಾಕಿಕೊಂಡು ಗುರಿಯನ್ನು ನಿಗದಿಪಡಿಸಿ ಕೊಳ್ಳಲಾಗುತ್ತದೆ. ನಿಗಧಿತ ಕಾಲಾವಧಿಯಲ್ಲಿ ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ:ಸಿಆಸುಇ/25/ಎಸ್‌ಎಲ್‌ಎ/2024**

**( ಸಿದ್ದರಾಮಯ್ಯ)**
ಮುಖ್ಯಮಂತ್ರಿ